ಕರ್ನಾಟಕ ವಿಧಾನ ಸಭೆ, ಸಂಶೋಧನಾ ಮತ್ತು ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಶಾಖೆ / ವಿಷಯ : DEPARTMENT / SUBJECT: ಸಂತಾಪ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ    ದಿನಾಂಕ : DATE : 07|11|2020

# ಕರ್ನಾಟಕ ಮಾಜಿ ಗೌರ್ನರ್ ಟಿ.ಎನ್.ಚತುರ್ವೇದಿ ನಿಧನ



ನೋಯ್ಡಾ: ಕರ್ನಾಟಕದ ಮಾಜಿ ರಾಜ್ಯಪಾಲ ಟಿ.ಎನ್. ಚತುರ್ವೇದಿ (90) ಅವರು ಭಾನುವಾರ ರಾತ್ರಿ ನಿಧನ ಹೊಂದಿದರು. ಏಕಾಏಕಿ ಎದೆ ನೋವು ಕಾಣಿಸಿಕೊಂಡ ಕಾರಣ ಅವರನ್ನು ನೋಯ್ಡಾದ ಕೈಲಾಶ್ ಆಸ್ಪತ್ರೆಗೆ ಸೇರಿಸಲಾಗಿತ್ತು. ಆದರೆ ಚಿಕಿತ್ಸೆ ಸಂದರ್ಭದಲ್ಲಿಯೇ ಅವರು ಆಸ್ಪತ್ರೆಯಲ್ಲಿ ಅಸುನೀಗಿದರು. 2002ರಿಂದ 2007ರವರೆಗೆ ಕರ್ನಾಟಕ ರಾಜ್ಯಪಾಲರಾಗಿ ಸೇವೆ ಸಲ್ಲಿಸಿ ದ್ದರು. 2004ರಲ್ಲಿ ಸಿಕಂದರ್ ಬಖ್ತ್ ನಿಧನ ಹೊಂದಿದ ಕಾರಣ ಆ ವರ್ಷದ ಫೆಬ್ರವರಿ 25ರಿಂದ ಜೂನ್‌ವರೆಗೆ ಕೇರಳದ ಹಂಗಾಮಿ ರಾಜ್ಯಪಾಲರಾಗಿಯೂ ಕೆಲಸ ಮಾ ಡಿದ್ದರು. ಚತುರ್ವೇದಿ ನಿಧನಕ್ಕೆ ಉಪರಾಷ್ಟ್ರಪತಿ ವೆಂಕಯ್ಯ ನಾಯ್ಡು ಸೇರಿ ಅನೇಕರು ಸಂತಾಪ ವ್ಯಕ್ತಪಡಿಸಿದ್ದಾರೆ.

**ಬಿಎಸ್‌ವೈ, ಎಚ್‌ಡಿಕೆ ಸಂತಾಪ:** ಚತುರ್ವೇದಿ ನಿಧನಕ್ಕೆ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಮತ್ತು ಮಾಜಿ ಸಿಎಂ ಎಚ್.ಡಿ. ಕುಮಾರಸ್ವಾಮಿ ಅವರು ಸಂತಾಪ ಸೂಚಿಸಿದ್ದಾರೆ. 'ಟಿ.ಎನ್.ಚತುರ್ವೇದಿ ಅವರು ಐಎಎಸ್ ಅಧಿಕಾರಿಯಾಗಿ, ಸಿಎಜಿಯಾಗಿ ಮತ್ತು ರಾಜ್ಯದ ರಾಜ್ಯಪಾಲರಾಗಿ ಅತ್ಯಂತ ದಕ್ಷತೆಯಿಂದ ಕಾರ್ಯ ನಿರ್ವಹಿಸಿದವರು. ಅವರ ಅಗಲಿಕೆಯ ನೋವನ್ನು ಕುಟುಂಬ ವರ್ಗ, ಬಂಧು-ಬಳಗ, ಅಭಿಮಾನಿಗಳಿಗೆ ಭರಿಸುವ ಶಕ್ತಿಯನ್ನು ದೇವರು ಕರುಣಿಸಲಿ' ಎಂದಿದ್ದಾರೆ ಸಿಎಂ ಯಡಿಯೂರಪ್ಪ. 'ಚತುರ್ವೇದಿ ಅವರು ಪಕ್ಷಾತೀತವಾಗಿ ಗೌರವಕ್ಕೆ ಪಾತ್ರರಾದವರು' ಎಂದು ಕುಮಾರಸ್ವಾಮಿ ಅವರು ಸ್ಮರಿಸಿದ್ದಾರೆ.